# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 454 |
| ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13-12-2018 |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದಲ್ಲಿ ಶಿಥಿಲಗೊಂಡಿರುವ ಹಾಗೂ ಅಪಾಯಸ್ಥಿತಿಯಲ್ಲಿರುವ ಎಷ್ಟು ಸರ್ಕಾರಿ ಶಾಲೆಗಳನ್ನು ಗುರುತಿಸಲಾಗಿದೆ; | ರಾಜ್ಯದ 6018 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಶಿಥಿಲಗೊಂಡಿರುವ 10969 ಕೊಠಡಿಗಳು ಮತ್ತು 264 ಪ್ರೌಢಶಾಲೆಗಳಲ್ಲಿ ಶಿಥಿಲಗೊಂಡಿರುವ 947 ಕೊಠಡಿಗಳನ್ನು ಗುರುತಿಸಲಾಗಿದೆ. |
| (ಆ) ಅವುಗಳನ್ನು ಸುಸ್ಥಿತಿಗೆ ತರಲು ಯಾವ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ; ಇದಕ್ಕಾಗಿ ಎಷ್ಟು ಹಣವನ್ನು ಮೀಸಲಾಗಿಡಲಾಗಿದೆ; ಎಷ್ಟು ಹಣ ಖರ್ಚು ಮಾಡಲಾಗಿದೆ; (ಕಳೆದ 2 ವರ್ಷಗಳ ಮಾಹಿತಿ ನೀಡುವುದು) | 2017-18ನೇ ಸಾಲಿನಲ್ಲಿ ರಾಜ್ಯ ವಲಯದಡಿಯಲ್ಲಿ 918 ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ 1037 ಕೊಠಡಿಗಳ ನಿರ್ಮಾಣಕ್ಕಾಗಿ ಒಟ್ಟು ರೂ.10597.05 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.<br><br>ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ 1661 ಶಾಲೆಗಳ 2175 ಕೊಠಡಿಗಳ ನಿರ್ಮಾಣಕ್ಕಾಗಿ ಒಟ್ಟು ರೂ.19220.30 ಲಕ್ಷಗಳನ್ನು ಅನುಮೋದಿಸಲಾಗಿದೆ.<br><br>2018-19ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ/ಪ್ರೌಢಶಾಲೆಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಈ ಕೆಳಕಂಡಂತೆ ಅನುದಾನ ಮಂಜೂರು ಮಾಡಲಾಗಿದೆ. |

| ಕ್ರ. ಸಂ | ವಿವರ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಪ್ರಾಥಮಿಕ ಶಾಲಾ ಕೊಠಡಿ ದುರಸ್ಥಿ | 1603.00 |
| 2 | ಪ್ರಾಥಮಿಕ ಶಾಲಾ ಕೊಠಡಿಗಳ ನಿರ್ಮಾಣ | 996.40 |
| 3 | ಪ್ರೌಢ ಶಾಲಾ ಕೊಠಡಿ ದುರಸ್ಥಿ | 1989.44 |
| 4 | ಪ್ರೌಢ ಶಾಲಾ ಕೊಠಡಿಗಳ ನಿರ್ಮಾಣ (ರಾಜ್ಯ ಬಂಡವಾಳ ವೆಚ್ಚ) | 6426.00 |
| 5 | **ವಿಶೇಷ ಪ್ಯಾಕೇಜ್ ಅಡಿಯಲ್ಲಿ :** | |
| | ಪ್ರಾಥಮಿಕ ಶಾಲೆಗಳ ಕೊಠಡಿ ನಿರ್ಮಾಣ | 16165.00 |
| | ಪ್ರೌಢಶಾಲೆಗಳ ಕೊಠಡಿ ನಿರ್ಮಾಣ | 13828.50 |
| 6 | ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆ | 1737.51 |

| | |
|---|---|
| (ಇ) ಶಿಥಿಲಗೊಂಡಿರುವ ಶಾಲೆಗಳಲ್ಲಿ ಮಕ್ಕಳ ಮತ್ತು ಉಪಾಧ್ಯಾಯರ ಬದುಕು ಆತಂಕದ ಸ್ಥಿತಿಯಲ್ಲಿರುವುದರಿಂದ ಸಮರೋಪಾದಿಯಲ್ಲಿ ಸುಸ್ಥಿತಿಗೆ ತರಲು ಕ್ರಮ ಕೈಗೊಳ್ಳಲಾಗುವುದೇ? | ಜುಲೈ 2018ರ ಆಯವ್ಯಯ ಘೋಷಣೆಯಂತೆ ವಿಶೇಷ ಪ್ಯಾಕೇಜ್ ಯೋಜನೆ ಅಡಿಯಲ್ಲಿ ಮುಂದಿನ ಮೂರು ವರ್ಷಗಳಿಗೆ ರೂ.450 ಕೋಟಿ ವೆಚ್ಚದಲ್ಲಿ, ಸರ್ಕಾರಿ ಪ್ರಾಥಮಿಕ/ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಅಗತ್ಯವಿರುವ ಕೊಠಡಿಗಳ ನಿರ್ಮಾಣಕ್ಕೆ ರೂ.100 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. |

ಇಡಿ 323 ಯೋಸಕ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ